# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **95**

ಸದಸ್ಯರ ಹೆಸರು : **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನ ಸಭಾ ಕ್ಷೇತ್ರ)**

ಉತ್ತರಿಸುವ ದಿನಾಂಕ : **27/01/2026**

ಉತ್ತರಿಸುವ ಸಚಿವರು : **ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು**

<table>
<tr><th colspan="2">ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿರುವ ನಗರ ಸ್ಥಳೀಯ ಸಂಸ್ಥೆ (ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆ) ಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ಗೌರವಧನವನ್ನು ಗಣನೀಯವಾಗಿ ಹೆಚ್ಚಿಸಬೇಕೆಂಬ ಬೇಡಿಕೆ ಬಹುಕಾಲದಿಂದ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ.</td></tr>
<tr><td>ಆ</td><td>ಬಂದಿದ್ದಲ್ಲಿ, ರಾಜ್ಯದಲ್ಲಿರುವ ನಗರ ಸ್ಥಳೀಯ ಸಂಸ್ಥೆ (ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರ ಸಭೆ) ಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಪ್ರಸ್ತುತ ನೀಡುತ್ತಿರುವ ಗೌರವಧನ ಎಷ್ಟು (ವಿವರ ನೀಡುವುದು);</td><td>ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರಿಗೆ ಸರ್ಕಾರದ ಆದೇಶದ ಸಂಖ್ಯೆ:ನಅಇ 156 ಎಂಎಲ್ಆರ್ 2015; ದಿನಾಂಕ:15/09/2016 ರನ್ವಯ ಮಾಸಿಕ ಗೌರವಧನವನ್ನು ಈ ಕೆಳಕಂಡಂತೆ ನೀಡಲಾಗುತ್ತಿದೆ:
<table>
<tr><th colspan="7">ಪ್ರಸ್ತುತ ನೀಡಲಾಗುತ್ತಿರುವ ಗೌರವಧನ (ಮಾಸಿಕ)</th></tr>
<tr><th>ಕ್ರ. ಸಂ</th><th>ನಗರ ಸ್ಥಳೀಯ ಸಂಸ್ಥೆಗಳು</th><th>ಅಧ್ಯಕ್ಷರು</th><th>ಉಪಾಧ್ಯಕ್ಷರು</th><th>ಸ್ಥಾಯಿ ಸಮಿತಿ ಸದಸ್ಯರು</th><th>ಸದಸ್ಯರು</th><th>ನಾಮನಿರ್ದೇಶನ ಸದಸ್ಯರು</th></tr>
<tr><td>1</td><td>ನಗರಸಭೆ–1</td><td>12000</td><td>8000</td><td>400</td><td>4000</td><td>4000</td></tr>
<tr><td>2</td><td>ನಗರಸಭೆ–2</td><td>8000</td><td>4000</td><td>400</td><td>2000</td><td>2000</td></tr>
<tr><td>3</td><td>ಪುರಸಭೆ</td><td>4800</td><td>2400</td><td>300</td><td>1200</td><td>1200</td></tr>
<tr><td>4</td><td>ಪಟ್ಟಣ ಪಂಚಾಯಿತಿ</td><td>3200</td><td>1600</td><td>200</td><td>800</td><td>800</td></tr>
</table>
</td></tr>
<tr><td>ಇ</td><td>ಸಾರ್ವಜನಿಕರ ಸಮಸ್ಯೆಗಳನ್ನು ಪರಿಹರಿಸಲು ನಿರಂತರವಾಗಿ ವ್ಯವಹರಿಸುವ ಮತ್ತು ಸ್ಪಂದಿಸುವ ನಗರ ಸ್ಥಳೀಯ ಸಂಸ್ಥೆ (ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆ) ಗಳ ಅಧ್ಯಕ್ಷರು, ಉಪಾಧ್ಯಕ್ಷರು</td><td>ರಾಜ್ಯದ ಮಹಾನಗರ ಪಾಲಿಕೆಗಳ ಮೇಯರ್, ಉಪಮೇಯರ್ & ಸದಸ್ಯರು ಹಾಗೂ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು & ಸ್ಥಾಯಿ ಸಮಿತಿ ಸದಸ್ಯರಿಗೆ ನೀಡಲಾಗುತ್ತಿರುವ ಗೌರವಧನವನ್ನು ಹೆಚ್ಚಳ ಮಾಡುವ ಬಗ್ಗೆ ಪರಿಶೀಲಿಸಿ ಆರ್ಥಿಕ ಇಲಾಖೆಯ ಅಭಿಪ್ರಾಯ ಕೋರಲಾಗಿರುತ್ತದೆ.</td></tr>
</table>

| | | |
|---|---|---|
| | ಹಾಗೂ ಸದಸ್ಯರುಗಳ ಗೌರವಧನವನ್ನು ಗಣನೀಯವಾಗಿ ಹೆಚ್ಚಿಸಲು ಯಾವ ಕಾಲಮಿತಿಯೊಳಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು? | ಆರ್ಥಿಕ ಇಲಾಖೆಯ ಅಭಿಪ್ರಾಯ/ಸಹಮತಿಯ ನಂತರ ಗೌರವಧನ ಹೆಚ್ಚಳ ಮಾಡುವ ಕುರಿತು ನಿರ್ಧರಿಸಲು ಅವಕಾಶವಾಗುತ್ತದೆ. |

**ಸಂಖ್ಯೆ:ನಅಇ 03 ಎಲ್‌ಸಿಕ್ಯೂ 2026**

(ರಹೀಂ ಖಾನ್)

**ಪೌರಾಡಳಿತ ಹಾಗೂ ಹಜ್ ಸಚಿವರು**